**ಕರ್ನಾಟಕ ಸರ್ಕಾರ**
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/35/ಸಿಡಿಸಿ(1)/2024(1490183)

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ,
ಬೆಂಗಳೂರು-560001,
ದಿನಾಂಕ:12-08-2024.

**ಸುತ್ತೋಲೆ**

ವಿಷಯ: ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ನ ಅಂತಿಮ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳಿಗೆ ಡಿ.ಸಿ.ಇ.ಟಿ. ಪೂರ್ವತಯಾರಿಗಾಗಿ saijayani academy ವತಿಯಿಂದ ಉಚಿತವಾಗಿ ಒಂದು ತಿಂಗಳ ಅವಧಿಯ ಕೋರ್ಸ್‌ಅನ್ನು ನೀಡುವ ಬಗ್ಗೆ.

ಉಲ್ಲೇಖ: ಜಂಟಿ ಕಾರ್ಯದರ್ಶಿ, Saijayani Academy ಇವರ ಪತ್ರ ಸಂಖ್ಯೆ: ಸಾ.ಜ./01/ಆಪ್/ಉ.ಶಿ.ಸ/ಬೆಂಗಳೂರು, ದಿನಾಂಕ: 09.01.2024

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ನ ಅಂತಿಮ ವರ್ಷದ ಡಿಪ್ಲೋಮಾ ವಿದ್ಯಾರ್ಥಿಗಳಿಗೆ 2024ನೇ ಸಾಲಿನ ಡಿಪ್ಲೋಮಾ ಸಿ.ಇ.ಟಿ. ಪರೀಕ್ಷೆಗೆ ಪೂರ್ವ ತಯಾರಿ ನಡೆಸಲು ಅನುಕೂಲವಾಗುವಂತೆ 2023ರ ಪರಿಷ್ಕೃತ ಡಿಪ್ಲೊಮ ಸಿ.ಇ.ಟಿ ಪಠ್ಯಕ್ರಮದಂತೆ ವಿಷಯಗಳನ್ನು ವಿಷಯವಾರು ಉಪನ್ಯಾಸಕರಿಂದ ಸಂಪೂರ್ಣ ಪಠ್ಯಕ್ರಮವನ್ನು ಪೂರ್ವ ರೆಕಾರ್ಡೆಡ್ ವೀಡಿಯೊ ಮೂಲಕ App ನಲ್ಲಿ ಸಿದ್ಧಪಡಿಸಲಾಗಿದ್ದು, saijayani academy app ನಲ್ಲಿ ಒಂದು ತಿಂಗಳ ಕೋರ್ಸ್‌ಅನ್ನು ಉಚಿತವಾಗಿ ಪೂರ್ವ ರೆಕಾರ್ಡ್ ಮಾಡಲಾದ ವೀಡಿಯೊ ತರಗತಿಗಳ ಮೂಲಕ ನೀಡುತ್ತಿದ್ದು, ಎಲ್ಲಾ ವಿದ್ಯಾರ್ಥಿಗಳು ಈ ಅವಕಾಶವನ್ನು ಬಳಸಿಕೊಳ್ಳುವಂತೆ ತಿಳಿಸಿರುತ್ತಾರೆ.

ಆದುದರಿಂದ ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳು ಸಂಸ್ಥೆಯ ಸೂಚನಾ ಫಲಕದಲ್ಲಿ ಸದರಿ ಸದವಕಾಶದ ಬಗ್ಗೆ ಪ್ರಕಟಿಸಿ, ಎಲ್ಲಾ ವಿದ್ಯಾರ್ಥಿಗಳಿಗೆ ಮಾಹಿತಿ ತಲುಪುವ ನಿಟ್ಟಿನಲ್ಲಿ ಕ್ರಮವಹಿಸಲು ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು (ಸಿಡಿಸಿ)

ಇವರಿಗೆ:
ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ-ಸೂಕ್ತ ಕ್ರಮಕ್ಕಾಗಿ.

ಪ್ರತಿ:

1. ಮಾನ್ಯ ಆಯುಕ್ತರ ಆಪ್ತಶಾಖೆ, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ನಿರ್ದೇಶಕರ ಆಪ್ತಶಾಖೆ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಇ-ಗವರ್ನೆನ್ಸ್ ವಿಭಾಗಕ್ಕೆ-ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು.
3. ಕಡತಕ್ಕೆ